O.S.No.: 221/2011
P.W.:1

ಈ ದಿನ ದಿಃ 24.10.2019 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಪಾಟೀ ಸವಾಲುಃ ಪ್ರತಿವಾದಿ ಪರ ವಿಡಿಜಿ ವಕೀಲರಿಂದಃ

ದಾವಾ ಆಸ್ತಿಯ ಸರ್ವೆ ನಂ.29/4. ದಾವಾ ಆಸ್ತಿಯು 13 ಗುಂಟೆ ಇದೆ. ನಾನು 1 ನೇ ಪ್ರತಿವಾದಿಯ ಮೇಲೆ ಈ ದಾವೆಯನ್ನು ಹಾಕಿರುತ್ತೇನೆ. ದಾವಾ ಆಸ್ತಿಯನ್ನು ಈ ಹಿಂದೆಯೇ ನಾನು ಮತ್ತು ನನ್ನ ತಾಯಿ ಪ್ರತಿವಾದಿಯವರಿಗೆ ಮಾರಾಟ ಮಾಡಿರುತ್ತೇವೆಂದರೆ ಸರಿಯಲ್ಲ. ಪ್ರತಿವಾದಿಯರು ದಾವಾ ಆಸ್ತಿಯಲ್ಲಿ ಮನೆ ಕಟ್ಟಿಕೊಂಡು ವಾಸವಿರುತ್ತಾರೆಂದರೆ ಸರಿಯಲ್ಲ. ನಾವು 8-6-1996 ರಂದು ಪ್ರತಿವಾದಿಯವರಿಗೆ ದಾವಾ ಆಸ್ತಿಯನ್ನು ಮಾರಾಟ ಮಾಡಿರುತ್ತೇವೆಂದರೆ ಸರಿಯಲ್ಲ. ಸದರಿ ದಿನದಂದೇ ಸ್ವಾಧೀನವನ್ನು ಪ್ರತಿವಾದಿಯರಿಗೆ ಬಿಟ್ಟುಕೊಟ್ಟಿರುತ್ತೇವೆಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಪ್ರತಿವಾದಿಯರು ಮನೆ ಕಟ್ಟಿಕೊಂಡು ವಾಸವಿರುತ್ತಾರೆಂದರೆ ಸರಿಯಲ್ಲ. ಸದರಿ ಮನೆಗೆ ವಿದ್ಯುಚ್ಚಕ್ತಿ ಕನಕ್ಷನ್ ತೆಗೆದುಕೊಂಡಿರುತ್ತಾರೆ ಮತ್ತು ಕಂದಾಯವನ್ನು ಸಹ ಪಾವತಿ ಮಾಡುತ್ತಿರುತ್ತಾರೆಂದರೆ ಸರಿಯಲ್ಲ. ಪ್ರತಿವಾದಿಯರಿಗೆ ದಾವಾ ಆಸ್ತಿಯಲ್ಲಿರುವ ಮನೆಯನ್ನು ಬಿಟ್ಟು ಬೇರೆ ಮನೆ ಇರುವುದಿಲ್ಲ ಎಂದರೆ ಸರಿಯಲ್ಲ. ಕೋರ್ಟು ಕಮಿಷನರ್ ನ್ನು ನೇಮಕ ಮಾಡಿ ಪ್ರತಿವಾದಿಯರು ವಾಸವಿರುವ ಬಗ್ಗೆ ತಿಳಿದುಕೊಳ್ಳಲು ಒಪ್ಪಿಗೆ ಇದೆಯೇ ಎಂದರೆ ಇಲ್ಲ. ನಾನು ಪ್ರತಿವಾದಿಯರು ದಾವಾ ಆಸ್ತಿಯಲ್ಲಿ ಮನೆಯನ್ನು ಕಟ್ಟಿಕೊಂಡಿದ್ದರು ಸಹ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಸುಮಾರು 20 ವರ್ಷಗಳಿಂದ ಪ್ರತಿವಾದಿಯರು ದಾವಾ ಆಸ್ತಿಯಲ್ಲಿ ಸ್ವಾಧೀನದಲ್ಲಿರುತ್ತಾರೆಂದರೆ ಸರಿಯಲ್ಲ. ನಮ್ಮ ಮತ್ತು ಪ್ರತಿವಾದಿಯರ ನಡುವೆ ಇದ್ದ ಸ್ನೇಹದ ಮೇಲಿನ ನಂಬಿಕೆಯಿಂದ ಕರಾರು ಪತ್ರವನ್ನು ಮಾಡಿಕೊಂಡಿದ್ದು ನಂತರ ಅವರು ಮನೆಯನ್ನು ಕಟ್ಟಿಕೊಂಡು ವಾಸವಿದ್ದು ನಾವು ಸುಮ್ಮನಿರುತ್ತೇವೆ ಮತ್ತು ಈಗ ಯಾವುದೋ ಒಂದು ವಿಷಯದಿಂದ ಸುಳ್ಳು ದಾವೆಯನ್ನು ಹಾಕಿರುತ್ತೇನೆಂದರೆ ಸರಿಯಲ್ಲ. ನಾನು ಈ ದಾವೆಯಲ್ಲಿ ಸ್ವಾಧೀನವನ್ನು ಕೇಳಿಲ್ಲ ಎಂದರೆ ಸಾಕ್ಷಿಯು ನಮ್ಮ ಸರ್ವೆ ನಂಬರ್ ನಲ್ಲಿ ಇದೆ ಎಂದು ನುಡಿಯುತ್ತಾರೆ. ದಾವಾ ಆಸ್ತಿಯಲ್ಲಿ ಕರಾರುಪತ್ರವನ್ನು ಮಾಡಿಕೊಂಡು ಮನೆಯನ್ನು ಕಟ್ಟಿರುತ್ತಾರೆಂದರೆ ಸರಿಯಲ್ಲ.

ಈ ಹಂತದಲ್ಲಿ ವಕೀಲರು ಮುಂದುವರಿದ ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು ಮುಂದೂಡಲಾಯಿತು.

(ಸಾಕ್ಷಿಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ,

ಒಂದನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್ ಸಿ ಕನಕಪುರ.